**Akashvani : Bangalore**
**National Bulletin In Kannada**
**10.09.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**10.09.2024 / 19.35 hrs**

**<><*<><>*><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ಎಎನ್‌ಆರ್‌ಎಫ್ ಆಡಳಿತ ಮಂಡಳಿಯ ಮೊದಲ ಸಭೆ; ಜಾಗತಿಕ ಸಮಸ್ಯೆಗಳಿಗೆ ಸ್ಥಳೀಯ ಪರಿಹಾರ ಕಂಡುಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಸಲಹೆ

೨. ಸೈಬರ್ ಅಪರಾಧ ಎದುರಿಸಲು ಐದು ಸಾವಿರ ಸೈಬರ್ ಕಮಾಂಡೋಗಳಿಗೆ ತರಬೇತಿ

೩. ಪ್ರಧಾನ ಮಂತ್ರಿ ಮತ್ಸ್ಯ ಕಿಸಾನ್ ಸಮೃದ್ಧಿ ಯೋಜನೆಗೆ ನಾಳೆ ಚಾಲನೆ

೪. ದೇಶದಲ್ಲಿ ೨೦೨೩-೨೦೨೪ನೇ ಸಾಲಿನಲ್ಲಿ ದ್ವಿಚಕ್ರ ಎಲೆಕ್ಟ್ರಿಕ್ ವಾಹನಗಳ ಮಾರಾಟದಲ್ಲಿ ಶೇಕಡ ೫೬ ರಷ್ಟು ಬೆಳವಣಿಗೆ

**<><*<><>*><>**

ಹೊಸದಾಗಿ ರಚಿಸಲಾದ ಅನುಸಂಧಾನ ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನ- ಎಎನ್‌ಆರ್‌ಎಫ್ ಆಡಳಿತ ಮಂಡಳಿಯ ಮೊದಲ ಸಭೆಯು ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿಂದು ನಡೆಯಿತು. ಸಭೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರದಾನ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಜಾಗತಿಕ ಸಮಸ್ಯೆಗಳಿಗೆ ಸ್ಥಳೀಯ ಪರಿಹಾರಗಳನ್ನು ಕಂಡುಕೊಳ್ಳಬೇಕು. ಸಂಶೋಧನಾ ಪರಿಸರ ವ್ಯವಸ್ಥೆಗೆ ಅಡ್ಡಿಯಾಗುತ್ತಿರುವ ಅಡೆತಡೆಗಳನ್ನು ಗುರುತಿಸಲು ಮತ್ತು ಈ ಸಮಸ್ಯೆಗಳನ್ನು ತೊಡೆದು ಹಾಕಲು ಕ್ರಮ ಕೈಗೊಳ್ಳವಂತೆ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈಗಿರುವ ಸಮಸ್ಯೆಗಳಿಗೆ ಹೊಸ ಪರಿಹಾರ ಕಂಡುಕೊಳ್ಳುವತ್ತ ಸಂಶೋಧನೆಗಳು ಗಮನ ಹರಿಸಬೇಕು ಎಂದರು. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ಶಿಫಾರಸ್ಸಿನ ಮೇರೆಗೆ ಎಎನ್‌ಆರ್‌ಎಫ್ ಸ್ಥಾಪಿಸಲಾಗಿದೆ. ಇದು ದೇಶದ ವಿಶ್ವವಿದ್ಯಾಲಯಗಳು, ಕಾಲೇಜುಗಳು, ಸಂಶೋಧನಾ ಸಂಸ್ಥೆಗಳು, ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯೋಗಾಲಯಗಳಲ್ಲಿ ಸಂಶೋಧನೆ ಮತ್ತು ನಾವೀನ್ಯತೆಯ ಸಂಸ್ಕೃತಿಯನ್ನು ಬೆಳೆಸುವ ಗುರಿಯನ್ನು ಇದು ಹೊಂದಿದೆ. ಅನುಸಂಧಾನ ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನವು ದೇಶದಲ್ಲಿ ವೈಜ್ಞಾನಿಕ ಸಂಶೋಧನೆಯ ಉನ್ನತಮಟ್ಟದ

ಕಾರ್ಯತಂತ್ರದ ನಿರ್ದೇಶನವನ್ನು ಒದಗಿಸಲು ಒಂದು ಉನ್ನತ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲಿದೆ.

<><*<><>*><>

ಸೈಬರ್ ಅಪರಾಧವನ್ನು ಎದುರಿಸಲು ಮುಂದಿನ ಐದು ವರ್ಷಗಳಲ್ಲಿ ಐದು ಸಾವಿರ ಸೈಬರ್ ಕಮಾಂಡೋಗಳಿಗೆ ತರಬೇತಿ ನೀಡಲು ಕೇಂದ್ರ ಸರ್ಕಾರ ಯೋಜಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರದ ಮೊದಲ ಸಂಸ್ಥಾಪನಾ ದಿನಾಚರಣೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸೈಬರ್ ಭದ್ರತೆಯು ರಾಷ್ಟ್ರೀಯ ಭದ್ರತೆಯ ಅವಿಭಾಜ್ಯ ಅಂಗವಾಗಿದೆ ಎಂದರು. ಇಂದು ಸೈಬರ್ ಭದ್ರತೆ ಇಲ್ಲದೆ ದೇಶದ ಪ್ರಗತಿ ಸಾಧ್ಯವಿಲ್ಲ. ಸೈಬರ್ ಅಪರಾಧಕ್ಕೆ ಯಾವುದೇ ಮಿತಿಯಿಲ್ಲದ ಕಾರಣ, ಈ ಬೆದರಿಕೆಯನ್ನು ಎದುರಿಸಲು ಎಲ್ಲಾ ಮಧ್ಯಸ್ಥಗಾರರನ್ನು ಒಗ್ಗೂಡಿಸಬೇಕಿದೆ ಎಂದು ಅಮಿತ್ ಶಾ ಹೇಳಿದ್ದಾರೆ.

<><*<><>*><>

ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಅವರು ನಾಳೆ ನವದೆಹಲಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಧಾನ ಮಂತ್ರಿ ಮತ್ಸ್ಯ ಕಿಸಾನ್ ಸಮೃದ್ಧಿ ಯೋಜನೆಗೆ ಚಾಲನೆ ನೀಡಲಿದ್ದಾರೆ.  ಮೀನುಗಾರಿಕಾ ವಲಯದಲ್ಲಿ ಉತ್ಪಾದನೆ ಮತ್ತು ಸಂಸ್ಕರಣಾ ಕ್ಲಸ್ಟರ್‌ಗಳ ಮೇಲೆ ಪ್ರಮಾಣಿತ ಕಾರ್ಯಾಚರಣೆಯ ವಿಧಾನವನ್ನು ಅವರು ಇದೇ ವೇಳೆ ಬಿಡುಗಡೆ ಮಾಡಲಿದ್ದಾರೆ. ಪ್ರಸಕ್ತ ಆರ್ಥಿಕ ವರ್ಷದಲ್ಲಿ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯ ಅಡಿಯಲ್ಲಿ ರಾಷ್ಟ್ರೀಯ ಆದ್ಯತೆಯ ಯೋಜನೆಗಳಿಗೆ ಇದು ಸಾಕ್ಷಿಯಾಗಲಿದೆ. ಕಾರ್ಯಕ್ರಮದಲ್ಲಿ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ರಾಜ್ಯ ಸಚಿವರಾದ ಎಸ್.ಪಿ.ಸಿಂಗ್ ಬಾಘೇಲ್ ಮತ್ತು ಜಾರ್ಜ್ ಕುರಿಯನ್, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳು, ಪ್ರಧಾನ ಮಂತ್ರಿ ಮತ್ಸ್ಯ ಕಿಸಾನ್ ಸಮೃದ್ಧಿ ಯೋಜನೆಯ ಫಲಾನುಭವಿಗಳು, ಮೀನುಗಾರರು ಮತ್ತು ಮೀನು ಕೃಷಿಕರು ಭಾಗವಹಿಸಲಿದ್ದಾರೆ.

<><*<><>*><>

ಗುಜರಾತ್‌ನ ಗಾಂಧಿನಗರದಲ್ಲಿ ಇದೇ ೧೬ ರಿಂದ ಮೂರು ದಿನಗಳ ಕಾಲ ನಡೆಯಲಿರುವ ನಾಲ್ಕನೇ ಜಾಗತಿಕ ಪುನರ್‌ಹೂಡಿಕೆ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಮಾವೇಶ ಹಾಗೂ ಪ್ರದರ್ಶನಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಚಾಲನೆ ನೀಡಲಿದ್ದಾರೆ.  ಕೇಂದ್ರ ನೂತನ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ, ಈ ಸಮಾವೇಶಕ್ಕೆ ಪೂರ್ವ ಸಿದ್ಧತೆಗಳ

ಕುರಿತು ಪರಿಶೀಲನೆ ನಡೆಸಿದರು. ಕೇಂದ್ರ ನೂತನ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ಮೂರು ದಿನಗಳ ಈ ಸಮಾವೇಶವನ್ನು ಆಯೋಜಿಸಿದೆ. ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಅಂತಾರಾಷ್ಟ್ರೀಯ ಸಹಕಾರ ಮತ್ತು ಅನ್ವೇಷಣೆಗೆ ಹೆಚ್ಚಿನ ಒತ್ತು ನೀಡುವ ಗುರಿಯನ್ನು ಈ ಸಮಾವೇಶ ಹೊಂದಿದೆ.

<><*<><>*><>

ದೇಶವು ಎಲೆಕ್ಟ್ರಿಕ್ ವಾಹನಗಳ ಮಾರಾಟದಲ್ಲಿ ಗಮನಾರ್ಹವಾದ ಬೆಳವಣಿಗೆ ಕಾಣುತ್ತಿದೆ. ೨೦೩೦ರ ವೇಳೆಗೆ ಎಲೆಕ್ಟ್ರಿಕ್ ವಾಹನಗಳ ವಾರ್ಷಿಕ ವಾಹನಗಳ ಮಾರಾಟವು ೧ ಕೋಟಿಗೆ ತಲುಪುವ ನಿರೀಕ್ಷೆಯಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ಭಾರತೀಯ ಆಟೋ ಮೊಬೈಲ್ ಉತ್ಪಾದಕರ ಸಂಘದ ೬೪ನೇ ವಾರ್ಷಿಕ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಎಲೆಕ್ಟ್ರಿಕ್ ವಾಹನಗಳ ಮಾರಾಟದಲ್ಲಿ ಬೆಳವಣಿವಣಿಗೆಯು ೫ ಕೋಟಿ ಉದ್ಯೋಗಗಳನ್ನು ಸೃಷ್ಟಿಸಲಿದೆ ಎಂದರು. ದೇಶದಲ್ಲಿ ಸುಮಾರು ೩೦ ಲಕ್ಷ ಎಲೆಕ್ಟ್ರಿಕ್ ವಾಹನಗಳು ನೋಂದಣಿಯಾಗಿವೆ. ೨೦೨೩-೨೦೨೪ನೇ ಹಣಕಾಸು ವರ್ಷದಲ್ಲಿ ನಾಲ್ಕು ಚಕ್ರದ ಎಲೆಕ್ಟ್ರಿಕ್ ವಾಹನಗಳ ಮಾರಾಟದಲ್ಲಿ ಶೇಕಡ ೪೫ ರಷ್ಟು ಹಾಗೂ ದ್ವಿಚಕ್ರ ಎಲೆಕ್ಟ್ರಿಕ್ ವಾಹನಗಳ ಮಾರಾಟದಲ್ಲಿ ಶೇಕಡ ೫೬ ರಷ್ಟು ಬೆಳವಣಿಗೆಯಾಗಿದೆ. ಈ ಅವಧಿಯಲ್ಲಿ ೪೦೦ ಸ್ಟಾರ್ಟ್‌ಅಪ್‌ಗಳು ದ್ವಿಚಕ್ರ ಎಲೆಕ್ಟ್ರಿಕ್ ವಾಹನಗಳ ತಯಾರಿಕೆ ಆರಂಭಿಸಿವೆ ಎಂದು ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

<><*<><>*><>

ಸುಸ್ಥಿರತೆ ಎಂಬುದು ಕೇವಲ ಆಯ್ಕೆಯಾಗದೆ, ಭೂಮಿಯ ಒಳಿತಿಗೆ ಅದು ಅತ್ಯಗತ್ಯವಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. 'ಉಕ್ಕು ಹಸರೀಕರಣ; ಸುಸ್ಥಿರತೆಗೆ ರಹದಾರಿ' ವರದಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಬೃಹತ್ ಉಕ್ಕು ಉದ್ಯಮವು ಪರಿಸರ ಸಮತೋಲನ ಕಾಯ್ದುಕೊಳ್ಳಬೇಕಾದರೆ ಸುಸ್ಥಿರತೆಯನ್ನು ಅಳವಡಿಸಿಕೊಳ್ಳುವುದು ಅವಶ್ಯಕವಾಗಿದೆ ಎಂದು ಅಭಿಪ್ರಾಯಪಟ್ಟರು. ಈ ವರದಿಯು ಉಕ್ಕು ಉದ್ಯಮದ ತಜ್ಞರು, ನೀತಿ ನಿರೂಪಕರು ಮತ್ತು ಉದ್ಯೋಗಸ್ಥರು ಸುಸ್ಥಿರತೆಯನ್ನು ಅಳವಡಿಸಿಕೊಳ್ಳುವುದಕ್ಕೆ ಸಹಾಯ ಮಾಡಲಿದೆ ಎಂದು ಹೇಳಿದರು.

<><*<><>*><>

ಉತ್ತರ ಪ್ರದೇಶದ ಗ್ರೇಟರ್ ನೋಯಿಡಾದಲ್ಲಿ ನಾಳೆಯಿಂದ ಮೂರು ದಿನಗಳ ಕಾಲ ನಡೆಯಲಿರುವ ಸೆಮಿಕಾನ್ ಇಂಡಿಯಾ ೨೦೨೪ ಸಮಾವೇಶದಲ್ಲಿ ೨೪ ದೇಶಗಳ ೨೫೦ಕ್ಕೂ ಹೆಚ್ಚು ಕಂಪನಿಗಳು

ಭಾಗವಹಿಸಲಿವೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ದೇಶದ ಅತ್ಯಂತ ಕ್ಲಿಷ್ಟಕರ ವಲಯದ ಕ್ಷಿಪ್ರ ಬೆಳವಣಿಗೆ ಹಿನ್ನೆಲೆಯಲ್ಲಿ ವಿದೇಶಿ ಕಂಪನಿಗಳು ಸಮಾವೇಶದಲ್ಲಿ ಭಾಗವಹಿಸಲು ಉತ್ಸುಕತೆ ತೋರಿವೆ ಎಂದು ಸರ್ಕಾರ ಹೇಳಿದೆ. ಈ ಕಂಪನಿಗಳು ಇಡೀ ಸೆಮಿಕಂಡಕ್ಟರ್ ಪೂರೈಕೆ ಸರಪಳಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿನ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವುದರ ಜೊತೆಗೆ ಹೊಸ ಪಾಲುದಾರಿಕೆಯನ್ನು ಮಾಡಿಕೊಳ್ಳಲು ಮುಂದಾಗಲಿವೆ ಎಂದು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನದ ಸಚಿವಾಲಯ ತಿಳಿಸಿದೆ. ಎಲ್ಲಾ ಪ್ರಮುಖ ಸೆಮಿಕಂಡಕ್ಟರ್ ಪೂರೈಕೆ ಸರಪಳಿಯ ಕಂಪನಿಗಳು ಭಾಗವಹಿಸಲು ಈ ಸಮಾವೇಶ ಬೃಹತ್ ವೇದಿಕೆಯನ್ನು ಒದಗಿಸಲಿದೆ ಎಂದು ಭಾರತೀಯ ಸೆಮಿಕಂಡಕ್ಟರ್ ಮಿಷನ್‌ನ ಸಿಇಒ ಆಕಾಶ್ ತ್ರಿಪಾಠಿ ತಿಳಿಸಿದ್ದಾರೆ.

<><*<><>*><>

ಹರಿಯಾಣದ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಮತ್ತು ಆಮ್ ಆದ್ಮಿ ಪಕ್ಷ ಅಭ್ಯರ್ಥಿಗಳ ೨ನೇ ಪಟ್ಟಿಯನ್ನು ಬಿಡುಗಡೆಗೊಳಿಸಿದೆ. ಬಿಜೆಪಿ ಬಿಡುಗಡೆಗೊಳಿಸಿರುವ ೨೧ ಅಭ್ಯರ್ಥಿಗಳ ಪಟ್ಟಿಯಲ್ಲಿ ಜುಲಾನ ಕ್ಷೇತ್ರದಿಂದ ಯೋಗೇಶ್ ಬೈರಾಗಿ, ರಾಯ್ ಕ್ಷೇತ್ರದಿಂದ ಕೃಷ್ಣ ಗಹ್ಲಾವಾಟ್, ಪಟೌಡಿ ಕ್ಷೇತ್ರದಿಂದ ಬಿಮ್ಲಾ ಚೌಧರಿ ಕಣಕ್ಕಿಳಿಯಲಿದ್ದಾರೆ. ಇದೇ ವೇಳೆ ಬರೋಡ ಕ್ಷೇತ್ರದಿಂದ ಪ್ರದೀಪ್ ಸಂಗ್ವಾನ್, ಫಿರೋಜ್ ಪೆರೋಸ್‌ಪುರ್ ಜಿರ್ಕಾ ಕ್ಷೇತ್ರದಿಂದ ನಸ್ಸೀಂ ಅಹಮ್ಮದ್ ಮತ್ತು ಪುನಹನ ಕ್ಷೇತ್ರದಿಂದ ಐರಾಜ್ ಖಾನ್ ಸ್ಪರ್ಧಿಸಲಿದ್ದಾರೆ. ಇನ್ನೊಂದಿಡೆ, ಆಮ್ ಆದ್ಮಿ ಪಕ್ಷವು ೯ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆಗೊಳಿಸಿದೆ. ಫರೀದಾಬಾದ್ ಕ್ಷೇತ್ರದಿಂದ ಪ್ರವೇಶ್ ಮೆಹತಾ, ರತಿಯಾ ಕ್ಷೇತ್ರದಿಂದ ಮುಕ್ತಿಯಾರ್ ಸಿಂಗ್ ಬಾಜಿಗರ್ ಅವರನ್ನು ಪಕ್ಷ ಕಣಕ್ಕಿಳಿಸಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೩೬೧ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೯೨೧ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ, ೧೦೪ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೪೧ ಅಂಕಗಳು ದಾಖಲಾಗಿದೆ. ವಿದೇಶೀ ವಿನಿಯಮ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೯೭ ಪೈಸೆಯಷ್ಟಾಗಿದೆ.

<><*<><>*><>

ಫಿಲಿಪೆನ್ಸ್‌ನ ಮನಿಲಾದಲ್ಲಿ ನಾಳೆ ಭಾರತ-ಫಿಲಿಪೆನ್ಸ್ ಜಂಟಿ ರಕ್ಷಣಾ ಸಹಕಾರ ಸಮಿತಿಯ ೫ನೇ ಸಭೆ ನಡೆಯಲಿದ್ದು, ಇದರ ಸಹ ಅಧ್ಯಕ್ಷತೆಯನ್ನು ಭಾರತದ ರಕ್ಷಣಾ ಕಾರ್ಯದರ್ಶಿ ಗಿರಿಧರ್ ಅರಮನೆ

ವಹಿಸಲಿದ್ದಾರೆ. ಫಿಲಿಪೀನ್ಸ್‌ನ ರಾಷ್ಟ್ರೀಯ ರಕ್ಷಣಾ ಸಚಿವಾಲಯದ ಹಿರಿಯ ಅಧೀನ ಕಾರ್ಯದರ್ಶಿ ಇರಿನಿಯೊ ಕ್ರುಝ್ ಎಸ್ಪಿನೊ ಸಹ ಅಧ್ಯಕ್ಷರಾಗಿ ಕಾರ್ಯಕ್ರಮ ನಿರ್ವಹಿಸಲಿದ್ದಾರೆ. ರಕ್ಷಣಾ ಸಚಿವಾಲಯದ ಮೂಲಗಳ ಪ್ರಕಾರ ಗಿರಿಧರ್ ಅವರು ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಸಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು ಫಿಲಿಪೀನ್ಸ್ ಸರ್ಕಾರದ ಪ್ರಮುಖರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ಭಾರತ ಹಾಗೂ ಫಿಲಿಪೆನ್ಸ್ ನಡುವೆ ರಕ್ಷಣಾ ಸಹಕಾರವನ್ನು ಮತ್ತಷ್ಟು ಗಟ್ಟಿಗೊಳಿಸಲು ಜಂಟಿ ರಕ್ಷಣಾ ಸಹಕಾರ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯ ಮೊದಲ ಸಭೆ ೨೦೧೨ರಲ್ಲಿ ಮನಿಲಾದಲ್ಲಿ ನಡೆದರೆ, ಎರಡನೇ ಸಭೆ ೨೦೧೭ರಲ್ಲಿ ನವದೆಹಲಿಯಲ್ಲಿ ನಡೆದಿತ್ತು.

<><*<><>*><>

ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾದ ಪದ್ಮ ಪ್ರಶಸ್ತಿಗಳಿಗೆ ಯೋಗ್ಯ ವ್ಯಕ್ತಿಗಳನ್ನು ನಾಮನಿರ್ದೇಶನ ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ಜನತೆಗೆ ಕರೆ ನೀಡಿದ್ದಾರೆ. ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಮಾಡಲು ಈ ತಿಂಗಳ ೧೫ ಕೊನೆಯ ದಿನವಾಗಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ಈಗಾಗಲೇ ಕೆಲವು ನಾಮನಿರ್ದೇಶನಗಳನ್ನು ಸ್ವೀಕರಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಮುಂದಿನ ೨೪ ಗಂಟೆಗಳಲ್ಲಿ ಕರ್ನಾಟಕದ ದಕ್ಷಿಣ ಒಳನಾಡು, ಮಧ್ಯಪ್ರದೇಶ, ಚತ್ತೀಸ್‌ಗಢ, ಒಡಿಶಾ, ತೆಲಂಗಾಣ, ಕೇರಳ ಮತ್ತು ಮಾಹೆಯ ಹಲವು ಪ್ರದೇಶಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಎರಡು ದಿನಗಳಲ್ಲಿ ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರದಲ್ಲಿ ತೀವ್ರ ಮಳೆಯಾಗಲಿದೆ. ಇದೇ ೧೧ ರವರೆಗೆ ಬಂಗಾಳಕೊಲ್ಲಿ, ಆಂಧ್ರ ಪ್ರದೇಶ, ಒಡಿಶಾ ಮತ್ತು ಪಶ್ಚಿಮ ಬಂಗಾಳದ ಕರಾವಳಿಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

<><*<><>*><>

ಇದೇ ತಿಂಗಳ ೨೯ ರಂದು ಆಕಾಶವಾಣಿಯಲ್ಲಿ ಪ್ರಸಾರವಾಗುವ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೪ನೇ ಆವೃತ್ತಿಯಾಗಿದ್ದು, ಸಾರ್ವಜನಿಕರು ೧-೯-೨-೨ ಕ್ಕೆ ಕರೆ ಮಾಡಬಹುದಾಗಿದೆ. ಅಲ್ಲದೇ ಎಸ್‌ಎಂಎಸ್ ಮೂಲಕ ಪ್ರಧಾನಮಂತ್ರಿಯವರಿಗೆ ಸಲಹೆಗಳನ್ನು ನೀಡಬಹುದಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**